**2 ನೇ ಹೆಚ್ಚುವರಿ ಪ್ರಥಮ ದರ್ಜೆಯ  ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ನಂಜನಗೂಡು**

**ಸಿ.ಸಿ 1656/2019** **ಸಿ. ಡಬ್ಲುಃ 02**

**ಪಿ. ಡಬ್ಲುಃ 02**

| | |
|---|---|
| ಸಾಕ್ಷಿದಾರರ ಹೆಸರು  ತಂದೆ/ ಗಂಡನ  ಹೆಸರು<br>ವಯಸ್ಸು<br>ಕೆಲಸ<br>ವಾಸ | ನಾಗರಾಜು<br>ಮಾದಪ್ಪ ಲೇ.<br>51 ವರ್ಷ<br>ವ್ಯವಸಾಯ<br>ತಾಂಡಪುರ    . |
| | **ಸತ್ಯ ಪ್ರತಿಜ್ಞೆಯ ಮೇರೆಗೆ ದಿನಾಂಕ 17-06-2026** |

**ಮುಖ್ಯ ವಿಚಾರಣೆಃ  ಶ್ರೀ. ಎಪಿಪಿ   ವಕೀಲರಿಂದಃ**

ಮೃತ  ಮರಿಪಚ್ಚೇಗೌಡ  ನಮ್ಮ ಪಕ್ಕದ ಗ್ರಾಮದವರು  ತಮ್ಮ . ಚಾಸಾ-1 ರಿಂದ 8  ನನಗೆ ಪರಿಚಯ ಇರುತ್ತದೆ.  ಆರೋಪಿ ನನಗೆ ಗೊತ್ತಿಲ್ಲ.

ಸಾಕ್ಷಿಗೆ ಒಂದು ದಾಖಲೆ ತೋರಿಸಿದ್ದು ಅದು ಸ್ಥಳ ಮಹಜರ್ ಆಗಿದ್ದು ಅದನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ-3 ಎಂದು, ಅದರ ಮೇಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ-3(ಎ) ಎಂದು ಗುರುತಿಸಲಾಯಿತು. ನಿಪಿ-3 ರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ನಿಪಿ-3 ಕ್ಕೆ ಸುಮಾರು 7 ವರ್ಷಗಳ ಹಿಂದೆ ಪೊಲೀಸರ ಕೋರಿಕೆ ಮೇರೆಗೆ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ನಿಪಿ-3 ಕ್ಕೆ ನನ್ನನ್ನು ಹೊರತುಪಡಿಸಿ ಬೇರೆ ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ.  ಪೊಲೀಸರು ನನ್ನ ಸಮಕ್ಷಮ ಯಾವುದೇ  ಮಹಜರ್ ಕ್ರಮ ಜರುಗಿಸಿರುವುದಿಲ್ಲ

ಈ ಪ್ರಕರಣದ ವಿದ್ಯಮಾನ ಗೊತ್ತಿಲ್ಲ. ಮತ್ತು ನಾನು ಪೋಲೀಸರು ಮುಂದೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

(ಸಸಅ ಅವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿಸಲು ಅನುಮತಿಯನ್ನು ಕೋರಿದ್ದು ಅನುಮತಿಯನ್ನು ನೀಡಲಾಯಿತು)

**<u>ಪಾಟೀ ಸವಾಲುಃ ಶ್ರೀ. ಎಪಿಪಿ ಯವರಿಂದ</u>**

ದಿಃ 01-02-2019 ರಂದು ಪೋಲೀಸರು ಅಪಘಾತ ಸ್ಥಳಕ್ಕೆ ಬಂದಾಗ ನಾನು ಅವರಿಗೆ ಸ್ಥಳ ತೋರಿಸಿಕೊಟ್ಟ ಮೇರೆಗೆ ನನ್ನ ಮತ್ತು ಚಾಸಾ-3 ಮತ್ತು 8 ರವರ ಸಮಕ್ಷಮ ಸಂಜೆ 5-00 ರಿಂದ 5-40 ಗಂಟೆಯ ನಿಪಿ-3 ರಂತೆ ಸ್ಥಳ ಮಹಜರು ಕ್ರಮ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಮತ್ತು ಸ್ಥಳದಲ್ಲಿ ನನ್ನ ಮತ್ತು ಚಾಸಾ-3 ಮತ್ತು 8 ರವರ ಸಹಿ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ.

ದಿಃ03-02-2019 ರಂದು ಪೋಲೀಸರು ನನ್ನನ್ನು ಠಾಣೆಗೆ ಕರೆಯಿಸಿ ಆರೋಪಿ ಯನ್ನು ತೋರಿಸಿದ್ದು ಆತನ ಹೆಸರು ವಿಳಾಸ ಕೇಳಲಾಗಿ ಮುಜೀದ್ ರೆಹಮಾನ್ .ಪಿ ಬಿನ್ ಸುಲೆಮಾನ್ , 30 ವರ್ಷ , ಪಿಲ್ಕಾರ್ಡನಿ ಹೌಸ್ ಕಾರ್ಕೋಡು ಅಂಚೆ, ಮಲ್ಲಪುರಂ ಜಿಲ್ಲೆ, ಎಂದು ತಿಳಿಸಿದನು ಎಂದರೆ ಸರಿಯಲ್ಲ.

ದಿಃ 03-02-2019 ರಂದು ಪೊಲೀಸರು ನನ್ನನ್ನು ವಿಚಾರಣೆ ಮಾಡಿ ನನ್ನ ಹೇಳಿಕೆ ಪಡೆದುಕೊಂಡರು ಎಂದರೆ ಸರಿಯಲ್ಲ. ನಾನು ನನ್ನ ಹೇಳಿಕೆಯಲ್ಲಿ

ದಿಃ 01-02-2019 ರಂದು ಮೃತ ಮರಿಪಚ್ಚೇಗೌಡರವರ ಶವ ತನಿಖಾ ಕಾಲದಲ್ಲಿ ಇತರ ಸಾಕ್ಷಿದಾರರಾಗಿ ಹೇಳಿಕೆ ನೀಡಿದ್ದು ---- ಮತ್ತೆ ನೋಡಿದರೆ ಗುರುತಿಸುತ್ತೇನೆ. ಎಂದು ಈಗ ನನಗೆ ಮೇಲೆ ಓದಿ ಹೇಳಲಾದಂತೆ ಪೋಲೀಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ.

ಸಾಕ್ಷಿಗೆ ಹೇಳಿಕೆ ಭಾಗವನ್ನು ಓದಿ ಹೇಳಲಾಗಿ ಸಾಕ್ಷಿ ಸದರಿ ಹೇಳಿಕೆ ಭಾಗವನ್ನು ಅಲ್ಲಗಳೆದಿದ್ದರಿಂದ ಕೆಂಪು ಶಾಯಿಯಿಂದ ಗುರುತಿಸಲಾದ ಭಾಗವನ್ನು ನಿಪಿ–4 ಎಂದು ಗುರುತಿಸಲಾಯಿತು. ನಿಪಿ–3 ಮತ್ತು 4 ರಲ್ಲಿ ಬರೆದಿರುವ ವಿಚಾರ ಗೊತ್ತಿದ್ದರು ಸಹ ಆರೋಪಿಗಳಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು ಆರೋಪಿತರ ಪರ ಶ್ರೀ ವಕೀಲರಿಂದಃ ಇಲ್ಲ**

**ಮರು ವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

**ಓ . ಹೇ. ಕೇ. ಸರಿ. ಇದೆ**

**2 ನೇ ಕಿ.ಪ್ರ.ದ. ನ್ಯಾ ದಂ. ನಂಜನಗೂಡು**